**ವಿಧಾನಪರಿಷತ್ತಿನ ಮಾನ್ಯ ಸದಸ್ಯರುಗಳಾದ ಶ್ರೀ ಎಸ್.ಎಲ್.ಭೋಜೇಗೌಡ ಹಾಗೂ ಶ್ರೀ ಮರಿತಿಬ್ಬೇಗೌಡ ಇವರುಗಳು ನಿಯಮ 330 ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಹೇಳಿಕೆ**

| | |
|---|---|
| ವಿಷಯ: | ಅನುದಾನಿತ ಕೈಗಾರಿಕಾ ತರಬೇತಿ ಕೇಂದ್ರಗಳ ನೌಕರರಿಗೆ ಶ್ರೀ ಥಾಮಸ್ ನೇತೃತ್ವದ ವರದಿಯಲ್ಲಿನ ಶಿಫಾರಸ್ಸನ್ನು ಸಚಿವ ಸಂಪುಟದಲ್ಲಿ ಒಪ್ಪಿಕೊಂಡು ಇತರೆ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ನೀಡಿರುವಂತೆ ಶೇಕಡಾ 100 ರಷ್ಟು ವೇತನಾನುದಾನ, ಪಿಂಚಣಿ ಮತ್ತು ನಿವೃತ್ತಿ ಸೌಲಭ್ಯಗಳು, ಸೇವಾ ಸೌಲಭ್ಯಗಳು ಹಾಗೂ ಸೇವಾ ನಿಯಮಗಳನ್ನು (ಅನುದಾನ ಸಂಹಿತೆ) ನೀಡಲು ಡಿಸೆಂಬರ್ 2014ರಲ್ಲಿ ಜಾರಿಗೊಳಿಸಲು ಆದೇಶಿಸಲಾಗಿದೆ. ಸೇವಾ ನಿಯಮಗಳನ್ನು ರೂಪಿಸುತ್ತಿರುವುದಾಗಿ ಹಲವಾರು ಬಾರಿ ಸದನದಲ್ಲಿ ಚರ್ಚೆಯಾಗಿ ಉತ್ತರ ನೀಡಿದ್ದರು ಸಹ ಇದುವರೆವಿಗೂ ನಿಯಮಗಳನ್ನು ರೂಪಿಸಿರುವುದಿಲ್ಲ. ಆದ್ದರಿಂದ ಸದರಿ ನೌಕರರಿಗೆ ಇತರೆ ಅನುದಾನಿತ ಶಾಲಾ ಕಾಲೇಜುಗಳಿಗೆ ನೀಡುತ್ತಿರುವ ಎಲ್ಲ ಸೌಲಭ್ಯಗಳನ್ನು ಅನುದಾನಿತ ಕೈಗಾರಿಕಾ ತರಬೇತಿ ಕೇಂದ್ರಗಳ ನೌಕರರಿಗೆ ಮಂಜೂರು ಮಾಡಿ ಆದೇಶ ಹೊರಡಿಸಬೇಕೆಂಬ ವಿಷಯದ ಕುರಿತು ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯಬಯಸುತ್ತೇವೆ. |

*******

ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಅನುದಾನ ಮತ್ತು ಸೇವಾ ನಿಯಂತ್ರಣಕ್ಕೆ ಸಂಬಂಧಿಸಿದಂತೆ "The Karnataka Technical Educational Institutions (Grant-in-aid for Private Industrial Training Institutes) Rules 2023" ಅನ್ನು ದಿನಾಂಕ: 31.01.2023ರ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿದ್ದು, ಬಾದಿತರಿಂದ ಆಕ್ಷೇಪಣೆ/ಸಲಹೆಗಳನ್ನು ಆಹ್ವಾನಿಸಲಾಗಿತ್ತು. ಸ್ವೀಕೃತವಾದ ಆಕ್ಷೇಪಣೆ / ಸಲಹೆಗಳ ಕುರಿತು ಪರಿಶೀಲಿಸಲಾಗುತ್ತಿದೆ.

* * * *

**ಕೌಉಜೀಇ 74 ಕೈತಪ್ರ 2023**

(ಡಾ. ಶರಣಪ್ರಕಾಶ್ ರುದ್ರಪ್ಪ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು.